# All India Radio: Bangalore
# Regional Bulletin In Kannada
# 01.04.2026 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ತುಮಕೂರಿನಲ್ಲಿ ಶಿವಕುಮಾರ ಸ್ವಾಮೀಜಿ ಗದ್ದುಗೆಗೆ ಪೂಜೆ ಸಲ್ಲಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು - ಸಿದ್ಧಗಂಗಾ ಮಠದ ಗುಣಗಾನ
2. ವಿಧಾನಸಭಾ ಉಪಚುನಾವಣೆ : ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತಯಾಚನೆ
3. ಉಪಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗಳ ಗೆಲುವು ಖಚಿತ ; ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿಶ್ವಾಸ
4. ಇಂದಿನಿಂದ ಡಿಜಿಟಲ್ ಜನಗಣತಿಗೆ ಚಾಲನೆ ; ಸಾರ್ವಜನಿಕರು ನಿಖರ ಮಾಹಿತಿ ನೀಡುವಂತೆ ಜಿಲ್ಲಾಡಳಿತ ಸೂಚನೆ
5. ಬೆಂಗಳೂರಿನಲ್ಲಿಂದು ವಿಶ್ವವಿಖ್ಯಾತ ಕರಗ ಶಕ್ತ್ಯೋತ್ಸವ ; ಹೂವಿನ ಕರಗದ ಮೆರವಣಿಗೆಗೆ ಸಕಲ ಸಿದ್ಧತೆ

<><><><>

ಶಿಕ್ಷಣ ಮತ್ತು ವ್ಯಕ್ತಿತ್ವ ಅಭಿವೃದ್ಧಿ ದೇಶಕ್ಕೆ ಉತ್ತಮ ಭವಿಷ್ಯವನ್ನು ಖಾತ್ರಿಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅಭಿಪ್ರಾಯಪಟ್ಟಿದ್ದಾರೆ. ತುಮಕೂರಿನ ಸಿದ್ಧಗಂಗಾ ಮಠದಲ್ಲಿಂದು ನಡೆದ ಡಾ.ಶಿವಕುಮಾರ ಸ್ವಾಮೀಜಿಗಳ ೧೧೯ನೇ ಜಯಂತಿ ಹಾಗೂ ಗುರುವಂದನಾ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸಿದ್ಧಗಂಗಾ ಮಠ ಕೇವಲ ಒಂದು ಧಾರ್ಮಿಕ ಸಂಸ್ಥೆಯಾಗಿರದೆ, ದೇಶದ ಸಾಮೂಹಿಕ ಬೆಳವಣಿಗೆಗೆ ನೆರವಾಗಲು ಸದಾ ಸಿದ್ಧವಿರುವ ಸಂಸ್ಥೆಯಾಗಿದೆ ಎಂದು ತಿಳಿಸಿದ್ದಾರೆ. ಸಿದ್ದಗಂಗಾ ಮಠ ಅನ್ನಗಂಗಾ, ಕರುಣಾಗಂಗಾ ಮತ್ತು ಶಿಕ್ಷಣಗಂಗಾ ಎಂಬ ಪರಂಪರೆಗಳನ್ನು ಮುನ್ನಡೆಸಿಕೊಂಡು ಹೋಗುತ್ತಿದೆ ಎಂದು ಬಣ್ಣಿಸಿದ್ದಾರೆ.

ಕಾರ್ಯಕ್ರಮದಲ್ಲಿ ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ, ವಿ. ಸೋಮಣ್ಣ, ಸಚಿವರಾದ ಡಾ. ಜಿ. ಪರಮೇಶ್ವರ್, ಎಂ.ಬಿ.ಪಾಟೀಲ್, ಲಕ್ಷ್ಮೀ ಹೆಬ್ಬಾಳ್ಕರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಇದಕ್ಕೂ ಮೊದಲು ಶಿವಕುಮಾರ ಸ್ವಾಮೀಜಿಗಳ ಗದ್ದುಗೆಗೆ ಸಿದ್ದಲಿಂಗ ಸ್ವಾಮೀಜಿ ಮುಂಜಾನೆಯೇ ಇಷ್ಟಲಿಂಗ ಪೂಜೆ ಹಾಗೂ ವಿಶೇಷ ಧಾರ್ಮಿಕ ಕೈಂಕರ್ಯವನ್ನು ನೆರವೇರಿಸಿದರು. ಜನ್ಮಜಯಂತಿ ಅಂಗವಾಗಿ ವಿಶೇಷ ಅಭಿಷೇಕ, ಪುಷ್ಪಾರ್ಚನೆಯನ್ನು ವಿವಿಧ ಮಠಗಳ ಮಠಾಧೀಶರು ನೆರವೇರಿಸಿದರು. ಶ್ರೀಗಳ ಗದ್ದುಗೆ ದರ್ಶನಕ್ಕೆ ಭಕ್ತಸಾಗರ ಹರಿದು ಬರುತ್ತಿದೆ. ಡಾ. ಶಿವಕುಮಾರ ಸ್ವಾಮೀಜಿಗಳ ೧೧೯ನೇ ಜಯಂತಿಯ ಸಂದರ್ಭದಲ್ಲಿ ಅವರಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ, ಗೌರವ ಪೂರ್ಣ ನಮನಗಳನ್ನು ಸಲ್ಲಿಸಿದ್ದಾರೆ. ಶಿಕ್ಷಣ, ಸಮಾಜಕಲ್ಯಾಣ ಮತ್ತು ಆಧ್ಯಾತ್ಮಿಕ ಕ್ಷೇತ್ರಗಳಲ್ಲಿ ಅವರ ಕೊಡುಗೆಗಳು ಸಮಾಜದ ಮೇಲೆ ಶಾಶ್ವತವಾದ ಛಾಪನ್ನು ಮೂಡಿಸಿದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

<><><><>

ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾಸಭಾ ಕ್ಷೇತ್ರದ ಉಪ ಚುನಾವಣೆ ಮತದಾನಕ್ಕೆ ೮ ದಿನ ಬಾಕಿ ಉಳಿದಿದೆ. ಉಭಯ ಕ್ಷೇತ್ರಗಳಲ್ಲಿ ಅಭ್ಯರ್ಥಿಗಳ ಪರ ಪ್ರಚಾರ ಚುರುಕುಗೊಂಡಿದೆ. ದಾವಣಗೆರೆ ದಕ್ಷಿಣ ಕ್ಷೇತ್ರ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಪರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಸೇರಿದಂತೆ ಹಲವು ಸಚಿವರು, ಶಾಸಕರು ರೋಡ್ ಶೋ ಮೂಲಕ ಮತಯಾಚಿಸಿದರು. ಇದಕ್ಕೂ ಮುನ್ನ ಹೆಲಿಪ್ಯಾಡ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಎರಡು ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಬಿಜೆಪಿ ಅಭ್ಯರ್ಥಿ

ಶ್ರೀನಿವಾಸ ದಾಸಕರಿಯಪ್ಪ ಅವರ ಪರವಾಗಿ ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ, ಬಸವರಾಜ್ ಬೊಮ್ಮಾಯಿ ಸತತ ಎರಡನೇ ದಿನವೂ ಪ್ರಚಾರ ನಡೆಸಿದರು.

<><><><>

ರಾಜ್ಯದಲ್ಲಿ ೨ ಲಕ್ಷ ೮೬ ಸಾವಿರಕ್ಕೂ ಹೆಚ್ಚು ಹುದ್ದೆಗಳು ಖಾಲಿಯಿದ್ದು, ಭರ್ತಿ ಮಾಡದೇ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾಲಹರಣ  ಮಾಡುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ಬಾಗಲಕೋಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳಿಗೆ ಹಣ ಕ್ರೋಢೀಕರಿಸಲು ಸಾಧ್ಯವಾಗದೇ ಹೈಕೋರ್ಟ್‌ನ ಕುಂಟುನೆಪ, ಮೀಸಲಾತಿ ನೆಪ ಹೇಳಿಕೊಂಡು ಸರ್ಕಾರ ನೇಮಕಾತಿಯನ್ನು ಮುಂದೂಡುತ್ತಿದೆ ಎಂದು ದೂರಿದ್ದಾರೆ. ಉಪಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗಳ ಗೆಲುವು ಖಚಿತ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

<><><><>

ಬಾಗಲಕೋಟೆ ಉಪಚುನಾವಣೆ ಹಿನ್ನೆಲೆಯಲ್ಲಿ ನೀತಿ ಸಂಹಿತೆ ಜಾರಿಯಾದ ದಿನದಿಂದ ಇದುವರೆಗೆ ಅಬಕಾರಿ ಇಲಾಖೆ ೧೧೫ ದಾಳಿಗಳನ್ನು ನಡೆಸಿ ೧೦೬ ಪ್ರಕರಣಗಳನ್ನು ದಾಖಲಿಸಿದೆ. ಈ ಸಂಬಂಧ ೯೨ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಅಬಕಾರಿ ಉಪ ಆಯುಕ್ತರು ಮಾಹಿತಿ ನೀಡಿದ್ದಾರೆ. ದಾಳಿ ವೇಳೆ ಮದ್ಯ, ೫ ದ್ವಿಚಕ್ರ ವಾಹನಗಳು ಹಾಗೂ ೨ ಕಾರುಗಳನ್ನು ವಶಪಡಿಸಿಕೊಳ್ಳಲಾಗಿದೆ. ವಶಪಡಿಸಿಕೊಂಡ ವಸ್ತುಗಳ ಒಟ್ಟು ಮೌಲ್ಯ ೪೧ ಲಕ್ಷ ೮೭ ಸಾವಿರ ಎಂದು ತಿಳಿಸಿದ್ದಾರೆ.

<><><><>

ದೇಶಾದ್ಯಂತ  ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಸಂಪೂರ್ಣ ಡಿಜಿಟಲ್ ಜನಗಣತಿಗೆ ಚಾಲನೆ ದೊರೆತಿದೆ. ಇದು ದೇಶದ ೧೬ನೇ ರಾಷ್ಟ್ರೀಯ ಜನಗಣತಿಯಾಗಿದ್ದು, ಸ್ವಾತಂತ್ರ್ಯಾನಂತರದ ೮ನೇ ಜನಗಣತಿಯಾಗಿದೆ. ಸಾಂಪ್ರದಾಯಿಕ ಕಾಗದ - ಪೆನ್ನು ಪದ್ಧತಿ ಕೈಬಿಟ್ಟು, ಮೊಬೈಲ್ ಆಪ್ ಮತ್ತು ವೆಬ್ ಪೋರ್ಟಲ್ ಮೂಲಕ ಮಾಹಿತಿ ಸಂಗ್ರಹಿಸಲಾಗುತ್ತಿದೆ. ಇಂದಿನಿಂದ ಸೆಪ್ಟೆಂಬರ್ ೩೦ರ ವರೆಗೆ ಮೊದಲ ಹಂತದಲ್ಲಿ ರಾಜ್ಯ ಸರ್ಕಾರಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಅಂತಿಮಗೊಳಿಸಿರುವ ವೇಳಾಪಟ್ಟಿಯಂತೆ ಸ್ವಯಂ ಗಣತಿ ಕಾರ್ಯ ಮತ್ತು ಮನೆಗಳನ್ನು ಗುರುತಿಸುವ ಕಾರ್ಯ ನಡೆಯಲಿದೆ. ಸ್ವಯಂ ಗಣತಿ ಕಾರ್ಯದ ಪೋರ್ಟಲ್, ೧೬ ಭಾರತೀಯ ಭಾಷೆಗಳಲ್ಲಿ ಸಾರ್ವಜನಿಕರಿಗೆ ಲಭ್ಯವಿದ್ದು, ಜನರು ತಾವೇ ಸ್ವಯಂ ಗಣತಿ ವಿವರಗಳನ್ನು ಒದಗಿಸಬಹುದಾಗಿದೆ. ಕೇಂದ್ರ ಸರ್ಕಾರವು ಈ ಬೃಹತ್ ಕಾರ್ಯಕ್ಕಾಗಿ ಸುಮಾರು ೧೧ ಸಾವಿರದ ೭೧೮ ಕೋಟಿ ರೂಪಾಯಿ ಬಜೆಟ್ ಅನುಮೋದಿಸಿದೆ.  ನಾಗರಿಕರು ಅಧಿಕೃತ ಪೋರ್ಟಲ್‌ಗೆ ಲಾಗ್‌ಇನ್ ಆಗಿ ತಮ್ಮ ಮಾಹಿತಿಯನ್ನು ತಾವೇ ತುಂಬಬಹುದು. ಇಂದು ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಅವರು, ಮೊಬೈಲ್ ಮೂಲಕ ಸ್ವಯಂ ಗಣತಿ ದಾಖಲಾತಿ ಪೂರ್ಣಗೊಳಿಸಿದ್ದಾರೆ. ಬಳಿಕ ಮಾತನಾಡಿದ ಅವರು, ಈ ಪ್ರಕ್ರಿಯೆ ಸರಳ ಮತ್ತು ಸುರಕ್ಷಿತವಾಗಿದೆ ಎಂದು ತಿಳಿಸಿದ್ದಾರೆ.

<><><><>

ಹಾವೇರಿ ಜಿಲ್ಲೆಯಲ್ಲಿ ಇಂದಿನಿಂದ ಮೇ ೧೫ರವರೆಗೆ ಮೊದಲ ಹಂತದ ಜನಗಣತಿ ನಡೆಸಲಾಗುತ್ತಿದ್ದು, ಜನರಿಂದ ಮಾಹಿತಿ ಸಂಗ್ರಹಿಸಲು ೩ ಸಾವಿರ ೨೧೮ ಗಣತಿದಾರರನ್ನು ನೇಮಿಸಲಾಗಿದೆ. ಸಾರ್ವಜನಿಕರು ನೀಡಿದ ಮಾಹಿತಿ ಗೌಪ್ಯವಾಗಿರಲಿದ್ದು, ಯಾವುದೇ ಸೌಲಭ್ಯಗಳು ಕಡಿತವಾಗುವುದಿಲ್ಲ, ಸಾರ್ವಜನಿಕರು ಯಾವುದೇ ವದಂತಿಗಳಿಗೆ ಕಿವಿಗೊಡದೆ ನಿಖರ ಮಾಹಿತಿ ನೀಡಬೇಕು ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ದಾವಣಗೆರೆ ಜಿಲ್ಲೆಯಲ್ಲಿ ಮೊದಲ ಹಂತದ 'ಮನೆಗಳ ಪಟ್ಟಿ ತಯಾರಿಕೆ ಮತ್ತು ವಸತಿ ಗಣತಿ' ಪ್ರಕ್ರಿಯೆಗೆ ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠಲ ರಾವ್ ಆನ್‌ಲೈನ್ ಮೂಲಕ ಮಾಹಿತಿ ಅಪ್‌ಲೋಡ್ ಮಾಡಿ ಅಭಿಯಾನಕ್ಕೆ ಅಧಿಕೃತ ಚಾಲನೆ ನೀಡಿದರು. ಇಂದಿನಿಂದ ಮೇ ೧೫ ರವರೆಗೆ ಮೊದಲ ಹಂತದ ಜನಗಣತಿ ನಡೆಯುತ್ತಿದ್ದು, ಇದೇ ಮೊದಲ ಬಾರಿಗೆ ದೇಶದಲ್ಲಿ 'ಡಿಜಿಟಲ್ ಜನಗಣತಿ' ನಡೆಸಲಾಗುತ್ತಿದೆ ಎಂದು ಕೋಲಾರ ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇಂದಿನಿಂದ ಏಪ್ರಿಲ್ ೧೫ ವರೆಗೆ ಸ್ವಯಂ ಗಣತಿ ಕಾರ್ಯ ನಡೆಯಲಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಂಡು ಜನಗಣತಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಕೆ.ಎನ್ ಅನುರಾಧ ಕರೆ ನೀಡಿದ್ದಾರೆ. ದೇಶದ ಪ್ರಗತಿಗೆ

ಪೂರಕವಾಗುವ ೨೦೨೭ರ ಜನಗಣತಿ ಸಂಪೂರ್ಣ ಡಿಜಿಟಲೀಕರಣವಾಗಿದ್ದು, ಮೊಬೈಲ್‌ಗಳಲ್ಲಿ ಸ್ವಯಂಗಣತಿ ಮಾಡಬಹುದಾಗಿದೆ ಎಂದು ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದ್ದಾರೆ.

<><><><>

ಬೆಂಗಳೂರಿನಲ್ಲಿ ಇಂದು ವಿಶ್ವವಿಖ್ಯಾತ ಕರಗ ಶಕ್ತ್ಯೋತ್ಸವ ನಡೆಯಲಿದೆ. ಇಂದು ಮಧ್ಯರಾತ್ರಿ ಹೂವಿನ ಕರಗ ನಡೆಯಲಿದ್ದು, ಸಚಿವರು, ಶಾಸಕರು ಭಾಗವಹಿಸಲಿದ್ದಾರೆ. ಈ ಬಾರಿಯೂ ಅರ್ಚಕ ಜ್ಞಾನೇಂದ್ರ ಕರಗ ಹೊರಲಿದ್ದಾರೆ. ಕರಗವು ಒಟಿಸಿ ರಸ್ತೆ, ಅವೆನ್ಯೂ ರಸ್ತೆ, ಮಾರ್ಕೆಟ್ ರಸ್ತೆ, ಮಸ್ತಾನ್ ಸಾಬ್ ದರ್ಗ, ಅಣ್ಣಮ್ಮ ದೇವಾಲಯ, ತಿಗಳರಪೇಟೆ ಮತ್ತಿತರ ಪ್ರದೇಶಗಳಲ್ಲಿ ಸಂಚರಿಸಲಿದೆ. ಲಕ್ಷಾಂತರ ಭಕ್ತರು ಸೇರುವ ನಿರೀಕ್ಷೆಯಿರುವುದರಿಂದ ದೇವಸ್ಥಾನದ ಸುತ್ತಮುತ್ತ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿದೆ. ಕರಗದ ಹಿನ್ನೆಲೆಯಲ್ಲಿ ಕೇಂದ್ರ ನಗರ ಪಾಲಿಕೆ ಆಯುಕ್ತ ರಾಜೇಂದ್ರ ಚೋಳನ್ ಇಂದು ಅಗತ್ಯ ಸಿದ್ಧತೆಗಳನ್ನು ಪರಿಶೀಲಿಸಿ, ಧರ್ಮರಾಯಸ್ವಾಮಿ ದೇವಸ್ಥಾನದ ಸುತ್ತಮುತ್ತಲಿನ ಪ್ರದೇಶಗಳ ಪರಿಶೀಲನೆ ನಡೆಸಿ ಅಧಿಕಾರಿಗಳಿಗೆ ಅಗತ್ಯ ನಿರ್ದೇಶನ ನೀಡಿದ್ದಾರೆ. ಕರಗ ಮಹೋತ್ಸವ ಕಾರ್ಯಕ್ರಮಕ್ಕೆ ಯಾವುದೇ ಅಡಚಣೆಯಾಗದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಮನ್ವಯದಿಂದ ಕಾರ್ಯ ನಿರ್ವಹಿಸುವಂತೆ ಸೂಚನೆ ನೀಡಿದ್ದಾರೆ.

<><><><>

ಬೆಂಗಳೂರಿನ ಹಾಸ್ಪೀಸ್ ಟ್ರಸ್ಟ್-ಕರುಣಾಶ್ರಯ ತನ್ನ ಆರೈಕೆದಾರ ಶಿಕ್ಷಣ ಸರಣಿಯಾದ ಮುಖ್ಯವಾದ ಕ್ಷಣಗಳು ಕನ್ನಡ ಆವೃತ್ತಿಯನ್ನು ಇಂದು ಆರೋಗ್ಯ ಸೌಧದಲ್ಲಿ ಲೋಕಾರ್ಪಣೆ ಮಾಡಿದೆ. ಈ ಉಪಕ್ರಮವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಉದ್ಘಾಟಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>